**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 725
ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ
(ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 21.08.2026
ಉತ್ತರಿಸುವ ಸಚಿವರು : ಮಾನ್ಯ ಜಲಸಂಪನ್ಮೂಲ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತುಂಗಾಭದ್ರ ಜಲಾಶಯದಲ್ಲಿ ಹೂಳಿನ ಶೇಖರಣೆಯಿಂದ ನೀರಿನ ಸಂಗ್ರಹಣಾ ಸಾಮರ್ಥ್ಯದ ಕೊರತೆಯನ್ನು ನೀಗಿಸಲು ಕೊಪ್ಪಳ ಜಿಲ್ಲೆಯ ನವಲಿ ಬಳಿ ಸಮತೋಲನ ಜಲಾಶಯ ನಿರ್ಮಾಣ ಕುರಿತು 2026-27ನೇ ಸಾಲಿನ ಆಯವ್ಯಯದಲ್ಲಿ ಪ್ರಸ್ತಾಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ತುಂಗಭದ್ರಾ ಜಲಾಶಯದಲ್ಲಿ ತುಂಬಿರುವ ಹೂಳಿನಿಂದಾಗಿ ಉಂಟಾಗಿರುವ ನೀರಿನ ಸಂಗ್ರಹಣೆಯಲ್ಲಿನ ಕೊರತೆಯನ್ನು ನೀಗಿಸಲು 2021-22ನೇ ಸಾಲಿನ ಏಕರೂಪ ದರಪಟ್ಟಿಯನ್ವಯ ರೂ.15,601.00 ಕೋಟಿ ಮೊತ್ತದ ಕೊಪ್ಪಳ ಜಿಲ್ಲೆಯ ನವಲಿ ಗ್ರಾಮದ ಹತ್ತಿರ ಸಮತೋಲನಾ ಜಲಾಶಯ ನಿರ್ಮಿಸುವ ಯೋಜನೆಯನ್ನು ರೂಪಿಸಲಾಗಿದೆ. ಈ ಯೋಜನಾ ವರದಿಯನ್ನು ತುಂಗಭದ್ರಾ ಮಂಡಳಿಗೆ ಫೆಬ್ರವರಿ-2024ರಲ್ಲಿ ಸಲ್ಲಿಸಲಾಗಿದೆ.<br><br>ದಿನಾಂಕ:22.11.2024 ಮತ್ತು 29.12.2025ರಂದು ನಡೆದ ತುಂಗಭದ್ರಾ ಮಂಡಳಿಯ ಸಭೆಗಳಲ್ಲಿ ಸದರಿ ವಿಷಯವು ಚರ್ಚೆಯಾಗಿದ್ದು, ಈ ಯೋಜನೆಗೆ ಮೂರು ರಾಜ್ಯಗಳ ಒಪ್ಪಿಗೆಯು ಅತ್ಯಗತ್ಯವೆಂದು ಮಂಡಳಿಯು ಅಭಿಪ್ರಾಯಿಸಿರುತ್ತದೆ. |
| ಆ) | ನವಲಿ ಸಮನಾಂತರ ಜಲಾಶಯ ನಿರ್ಮಾಣವು ರಾಯಚೂರು, ಕೊಪ್ಪಳ, ಹಾಗೂ ಬಳ್ಳಾರಿ ಜಿಲ್ಲೆಯ ಸ್ಥಳೀಯ ರೈತರಿಗೆ ನೀರಾವರಿ ಸೌಲಭ್ಯ ಒದಗಿಸುವ ಪ್ರಮುಖ ಯೋಜನೆಯಾಗಿದ್ದು; ಇದರ ಪೂರ್ಣಗೊಳ್ಳುವಿಕೆಯಿಂದ ಹಲವಾರು ಹಳ್ಳಿಗಳ ಕೃಷಿಗೆ ಶಾಶ್ವತ ನೀರಾವರಿ ಹಾಗೂ ಜನ-ಜಾನುವಾರುಗಳಿಗೆ ಕುಡಿಯುವ ನೀರು ಲಭ್ಯವಾಗುವುದಾಗಿ ಸರ್ಕಾರಕ್ಕೆ ತಿಳಿದು ಬಂದಿದೆಯೇ; | ಮುಂದುವರೆದು, ನವಲಿ ಯೋಜನೆ ಸೇರಿದಂತೆ ಪರ್ಯಾಯ ಯೋಜನೆಗಳ ಕುರಿತು ಸಹಮತ ಮೂಡಿಸಲು ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಚರ್ಚಿಸಲು ಸಭೆ ನಡೆಸಲು ಈ ರಾಜ್ಯಗಳೊಂದಿಗೆ ಪತ್ರ ವ್ಯವಹಾರ ನಡೆಸಲಾಗಿದ್ದು, ಪ್ರತಿಕ್ರಿಯೆ ನಿರೀಕ್ಷಿಸಲಾಗಿದೆ.<br><br>ಈ ಮಧ್ಯೆ, ತುಂಗಭದ್ರಾ ಅಣೆಕಟ್ಟೆಯ ಎಲ್ಲಾ 33 ಗೇಟುಗಳ ಬದಲಾವಣೆ ಕಾಮಗಾರಿ ಪೂರ್ಣಗೊಂಡ ಹಿನ್ನೆಲೆಯಲ್ಲಿ, ದಿನಾಂಕ:25.06.2026ರಂದು ಕೇಂದ್ರ ಜಲಶಕ್ತಿ ಸಚಿವರು, ಕರ್ನಾಟಕದ ಮಾನ್ಯ ಮುಖ್ಯಮಂತ್ರಿಗಳು, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಮಾನ್ಯ ಮುಖ್ಯಮಂತ್ರಿಗಳ ಉಪಸ್ಥಿತಿಯಲ್ಲಿ ಹೊಸಪೇಟೆಯಲ್ಲಿ ಜರುಗಿದ ಹೊಸ ಸ್ಪಿಲ್‌ವೇ ಗೇಟ್‌ಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ತುಂಗಭದ್ರಾ ಜಲಾಶಯದಲ್ಲಿ ಸುಮಾರು 26 ಟಿಎಂಸಿಯಷ್ಟು ಹೂಳು ತುಂಬಿರುವ ಹಿನ್ನೆಲೆಯಲ್ಲಿ ಸಂಗ್ರಹಣೆ ಕೊರತೆಯನ್ನು ನೀಗಿಸುವ ಸಂಬಂಧ ತಾಂತ್ರಿಕ ವರದಿ ತಯಾರಿಸಿ ಕ್ರಮ ಕೈಗೊಳ್ಳಲು ನಿರ್ಧರಿಸಲಾಗಿರುತ್ತದೆ. |
| ಇ) | ಬಂದಿದ್ದಲ್ಲಿ, ಈ ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ; ಯಾವ ಕಾಲಮಿತಿಯೊಳಗೆ ಈ ಯೋಜನೆಯನ್ನು ಪೂರ್ಣಗೊಳಿಸಲಾಗುತ್ತದೆ? | ಅದರಂತೆ, Tungabhadra Basin Issues ಕುರಿತಂತೆ ಕೇಂದ್ರ ಜಲ ಶಕ್ತಿ ಸಚಿವಾಲಯವು OM ದಿನಾಂಕ:11.07.2026ರಲ್ಲಿ Member (WP & P), CWC, New Delhi ಇವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು (High Power Committee) ರಚಿಸಲಾಗಿದೆ.<br><br>ಸದರಿ ಸಮಿತಿಯು ವರದಿ ಸಲ್ಲಿಸಿದ ನಂತರ, ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳು ಮತ್ತು ತುಂಗಭದ್ರಾ ಮಂಡಳಿಯ ಸಹಮತಿಯೊಂದಿಗೆ ಯೋಜನೆ ಕಾರ್ಯಗತಗೊಳಿಸಬೇಕಾಗಿದೆ. |

**ಜಸಂಇ 79 ಎಂಎಲ್‌ಎ 2026**

(ಎನ್. ಚಲುವರಾಯಸ್ವಾಮಿ)
**ಜಲಸಂಪನ್ಮೂಲ ಸಚಿವರು**